ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 4/6/2010

# ಸುವರ್ಣಸೌಧಕ್ಕೆ ಕಚೇರಿಗಳ ಸ್ಥಳಾಂತರಿಸಲು ತಿಂಗಳ ಗಡುವು

**ಬೆಂಗಳೂರು:** ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿಗೆ ಪೂರಕವಾದ ರಾಜ್ಯ ಮಟ್ಟದ ಸರಕಾರಿ ಕಚೇರಿಗಳನ್ನು ಒಂದು ತಿಂಗಳ ಒಳಗೆ ಬೆಂಗಳೂರಿನಿಂದ ಬೆಳಗಾವಿಯ ಸುವರ್ಣಸೌಧಕ್ಕೆ ಸ್ಥಳಾಂತರಿಸುವಂತೆ ಸಿಎಂ ಯಡಿಯೂರಪ್ಪ ಗಡುವು ವಿಧಿಸಿದ್ದಾರೆ.



ಡಿಸಿಎಂ ಗೋವಿಂದ ಕಾರಜೋಳ ಹಾಗೂ ಅಧಿಕಾರಿಗಳೊಂದಿಗೆ ಲೋಕೋಪಯೋಗಿ ಇಲಾಖೆ ಸಭೆ ನಡೆಸಿದ ಅವರು, ಸುವರ್ಣ ಸೌಧಕ್ಕೆ ಕಚೇರಿ ಸ್ಥಳಾಂತರ ವಿಳಂಬ ಆಗುತ್ತಿರುವುದಕ್ಕೆ ಆಕ್ಷೇಪಿಸಿದರು. ಮುಂದಿನ ಸಭೆಯೊಳಗೆ ಕಚೇರಿ ಸ್ಥಳಾಂತರ ಆಗಬೇಕು. ಈ ಬಗ್ಗೆ ಖುದ್ದು ಪರಿಶೀಲನೆ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಪ್ರವಾಹದಿಂದ ಹಾಳಾಗಿರುವ ರಸ್ತೆ, ಸೇತುವೆ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಳ್ಳಲು ಸಿಎಂ ಸೂಚಿಸಿದರು. ಪ್ರವಾಹದಿಂದ ಹಾನಿಗೊಳಗಾದ ರಸ್ತೆ ದುರಸ್ತಿಗೆ ಈವರೆಗೆ 500 ಕೋಟಿ ರೂ. ವೆಚ್ಚ ಮಾಡಲಾಗಿದೆ. 1,700 ಕಾಮಗಾರಿ ಕೈಗೊಳ್ಳಲಾಗಿದೆ. ಸೇತುವೆ ನಿರ್ಮಾಣ, ದುರಸ್ತಿ ಕಾರ್ಯ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಎಂಜಿನಿಯರ್‌ಗಳ ನೇಮಕ ವಿಳಂಬವಾಗಿರುವುದರಿಂದ ಸದ್ಯಕ್ಕೆ ನಿರುದ್ಯೋಗಿ ಎಂಜಿನಿಯರ್‌ಗಳನ್ನು ಟ್ರೈನಿಗಳೆಂದು ನೇಮಿಸಿಕೊಳ್ಳಬೇಕು. ಕೆರೆ, ಹಳ್ಳ ನದಿಪಾತ್ರದ ಮಣ್ಣನ್ನು ರಸ್ತೆ ಕಾಮಗಾರಿಗಳಿಗೆ ಉಪಯೋಗಿಸಬೇಕು. ರಾಜ್ಯದಲ್ಲಿ 30,675 ಕೋಟಿ ರೂ. ವೆಚ್ಚದಲ್ಲಿ ಹೆದ್ದಾರಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಕೇಂದ್ರದ ಮಾರ್ಗಸೂಚಿಯಂತೆ ಅಂತರ್ಜಲ ವೃದ್ಧಿ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಸೇತುವೆಗಳ ಕೆಳಗೆ 1 ಮೀಟರ್ ತಡೆಗೋಡೆ ನಿರ್ಮಿಸಿ ನೀರು ಸಂಗ್ರಹಿಸಬೇಕೆಂದು ಸಿಎಂ ಸೂಚಿಸಿದರು.

**ರಸ್ತೆ ಮೇಲ್ದರ್ಜೆಗೆ**

ರಾಜ್ಯದ 1,650 ಕಿ.ಮೀ. ಉದ್ದದ ಗ್ರಾಮೀಣ ರಸ್ತೆಯನ್ನು ಜಿಲ್ಲಾ ಮುಖ್ಯ ರಸ್ತೆಯಾಗಿ ಹಾಗೂ 10,110 ಕಿ.ಮೀ. ಜಿಲ್ಲಾ ಮುಖ್ಯ ರಸ್ತೆಯನ್ನು ರಾಜ್ಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**ವೆಚ್ಚ ಕಡಿತದ ಸಲಹೆ**

ನಾನಾ ಎಂಜಿನಿಯರಿಂಗ್ ಇಲಾಖೆಗಳ ದರಪಟ್ಟಿ ಪರಿಶೀಲಿಸಿ ರಾಜ್ಯಾದ್ಯಂತ ಏಕರೂಪ ದರಪಟ್ಟಿ ಪ್ರಕಟಿಸಲು ಇಲಾಖೆಯ ನಿವೃತ್ತ ಅಧಿಕಾರಿಗಳ ತಾಂತ್ರಿಕ ಸಮಿತಿ ಅಧ್ಯಯನ ನಡೆಸುತ್ತಿದೆ. ಶೀಘ್ರದಲ್ಲೇ ವರದಿ ಸಲ್ಲಿಕೆಯಾಗಲಿದೆ. ಏಕರೂಪ ದರಪಟ್ಟಿ ಜಾರಿಯಾದರೆ ನೂರಾರು ಕೋಟಿ ರೂ. ಉಳಿತಾಯವಾಗಲಿದೆ ಎಂದು ಲೋಕೋಪಯೋಗಿ ಖಾತೆ ಹೊಂದಿರುವ ಡಿಸಿಎಂ ಗೋವಿಂದ ಕಾರಜೋಳ ತಿಳಿಸಿದರು.